# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021    ಪ್ರಶ್ನೆ ಸಂಖ್ಯೆ : 2062 (2325)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿರುವ ಕುರಿತು

(ಅ) ಮೆ, ಭಾಗ್ಯಶ್ರೀ ಲಗಮವ್ವ ಶುಗರ್ಸ್ ಲಿ., ಬೆಕ್ಕೇರಿ ಗ್ರಾಮ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರು ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿ ಕಾರ್ಖಾನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಹಿಂದೆ ಕಾನೂನು ಬಾಹಿರವಾಗಿ ನಡೆಯುತ್ತಿದ್ದ ಈ ಕಾರ್ಖಾನೆಯನ್ನು ಮಾಲಿನ್ಯ ನಿಯಂತ್ರಣ ಮಂಡಳಿಯವರು ಸೀಂಜ್ ಮಾಡಿದ್ದರೂ ಸಹ ಅಕ್ರಮವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸೀಝ್ ಮಾಡಿದ ಕಾರ್ಖಾನೆಯನ್ನು ಕಾನೂನುಬಾಹಿರವಾಗಿ ತೆರೆದು ನಡೆಸುತ್ತಿರುವ ಬಗ್ಗೆ ಮಾಲಿನ್ಯ ನಿಯಂತ್ರಣ ಮಂಡಳಿ, ಚಿಕ್ಕೋಡಿ, ಇವರು ಬೆಂಗಳೂರಿನ ಕೇಂದ್ರ ಕಛೇರಿಗೆ ವರದಿ ನೀಡಿದ್ದರೂ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕಾರ್ಖಾನೆಯ ವಿರುದ್ಧ ಇದುವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ ; ಇಲ್ಲದಿದ್ದಲ್ಲಿ, ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು ? (ಸಂಪೂರ್ಣ ವಿವರ ನೀಡುವುದು)